ಒದಗಿಸುತ್ತಿದ್ದು, ತನಿಖೆಯನ್ನು ಪೂರ್ಣಗೊಳಿಸಿ, ಶೀಘ್ರದಲ್ಲೆ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲಾಗುವುದು.

ಇ) ತಡೆ ಹಿಡಿಯಲಾದ 4399 ರೈತರು ಬೆಳೆ ವಿಮಾ ನಷ್ಟ ಪರಿಹಾರವನ್ನು ಭಾರತೀಯ ಕೃಷಿ ವಿಮಾ ಕಂಪನಿ ನಿಯಮಿತ ಸಂಸ್ಥೆಯು ತನಿಖೆಯನ್ನು ಪೂರ್ಣಗೊಳಿಸಿ ಶೀಘ್ರದಲ್ಲಿ ಇತ್ಯರ್ಥಪಡಿಸಲಿದೆ.

506(461) : ಶ್ರೀ ಅಕ್ಕಿ ಮಲ್ಲಿಕಾರ್ಜುನ್ ಸಹದೇವಪ್ಪ (ಕುಂದಗೋಳ) ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ರೈತ ಸಂಜೀವಿನಿ ಯೋಜನೆಯು ಜಾರಿಯಲ್ಲಿದೆಯೆ;

ಆ) ಯೋಜನೆಯ ವಿವರಗಳೇನು;

ಇ) ಧಾರವಾಡ ಜಿಲ್ಲೆಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆ;

ಈ) ಈ ಯೋಜನೆಗೆ ಮೀಸಲಾಗಿಟ್ಟ ಹಣದ ಮೊತ್ತ ಎಷ್ಟು?

ಶ್ರೀ ಪ್ರಕಾಶ ಬಿ. ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು)

ಅ) ಇದೆ.

ಆ) ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯು ರಾಜ್ಯದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಸಹಯೋಗದೊಂದಿಗೆ "ರೈತ ಸಂಜೀವಿನಿ" ಅಪಘಾತ ಪರಿಹಾರ ಯೋಜನೆಯನ್ನು 1996 ರಿಂದ ಜಾರಿಗೊಳಿಸುತ್ತಿದೆ. ರಾಜ್ಯದಲ್ಲಿ ಜಮೀನು ಹೊಂದಿರುವ ರೈತರು ಅಥವಾ ಅವರ ಕೃಷಿ ಅವಲಂಬಿತ ಕುಟುಂಬ ಸದಸ್ಯರು ಕೃಷಿ ಜಮೀನಿನಲ್ಲಿ ಕೃಷಿ ಚಟುವಟಿಕೆಗಳಲ್ಲಿ ತೊಡಗಿರುವಾಗ ಹಾಗೂ ಮುಖ್ಯ ಮಾರುಕಟ್ಟೆ ಪ್ರಾಂಗಣ, ಉಪ ಮಾರುಕಟ್ಟೆ ಪ್ರಾಂಗಣ ಮತ್ತು ಮಾರುಕಟ್ಟೆ ಉಪ ಪ್ರಾಂಗಣಗಳಲ್ಲಿ ಕೃಷಿ ಮಾರಾಟ ಚಟುವಟಿಕೆಗಳಲ್ಲಿ ತೊಡಗಿರುವಾಗ ಅಪಘಾತ ಸಂಭವಿಸಿ, ನಾವು ಅಥವಾ ಅಂಗವಿಕಲತೆ ಉಂಟಾದಲ್ಲಿ ಅವರ ಕುಟುಂಬಕ್ಕೆ ಆರ್ಥಿಕ ಸಹಾಯ ನೀಡಿ ಸಾಮಾಜಿಕ ಭದ್ರತೆ ಒದಗಿಸುವುದು. ರೈತ ಸಂಜೀವಿನಿ ಅಪಘಾತ ಪರಿಹಾರ ಯೋಜನೆಯ ಮೂಲ ಉದ್ದೇಶವಾಗಿರುತ್ತದೆ. ಅಪಘಾತದಿಂದ ಮರಣ ಹೊಂದಿದ ಸಂದರ್ಭಗಳಲ್ಲಿ ರೂ. 25,000-00ಗಳ ಪರಿಹಾರಧನ ಹಾಗೂ ಅಂಗವಿಕಲತೆ ಉಂಟಾದಲ್ಲಿ ಅಂಗವಿಕಲತೆಗೆ ಅನುಗುಣವಾಗಿ 1,500-00 ರೂ.ಗಳವರೆಗೆ ನಿಯಮದಡಿ ದಾಖಲಾತಿಗಳನ್ನು ಪರಿಶೀಲಿಸಿ ಮಂಜೂರು ಮಾಡಲು ರೈತ ಸಂಜೀವಿನಿ ನಿಯಮಾವಳಿಗಳಲ್ಲಿ ಅವಕಾಶವಿರುತ್ತದೆ.

ಇ) ದಿನಾಂಕ 1-4-1996 ರಿಂದ 31-12-2004 ರವರೆಗೆ ಧಾರವಾ ಜಿಲ್ಲೆಯಲ್ಲಿ ಒಟ್ಟು 38 ಜನ ಫಲಾನುಭವಿಗಳಿಗೆ 6,73,000-00 ರೂ.ಗಳನ್ನು ರೈತ ಸಂಜೀವಿನಿ ಅಪಘಾತ ವಿಮಾ ಯೋಜನೆಯಡಿಯಲ್ಲಿ ಮಂಜೂರು ಮಾಡಿದೆ.

ಈ) ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯು 2004–05ನೇ ಸಾಲಿನ ಆಯವ್ಯಯದಲ್ಲಿ ಈ ಯೋಜನೆಗೆ ರೂ. 1.20 ಕೋಟಿಗಳನ್ನು ಮೀಸಲಿರಿಸಿದೆ.

507(958) : ಶ್ರೀ ಅಲ್ಕೋಡ್ ಹನುಮಂತಪ್ಪ (ದೇವದುರ್ಗ) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯಲ್ಲಿ ಯೋಜನಾವಾರು ತಾಲ್ಲೂಕುವಾರು ಯಾವ ಯಾವ ಯೋಜನೆಗಳಿಗೆ ಎಷ್ಟು ಹಣ ಮಂಜೂರು ಮಾಡಲಾಗಿದೆ, ಖರ್ಚಾದ ಮತ್ತು ಉಳಿದ ಹಣ ಎಷ್ಟು;

ಆ) ಸರ್ಕಾರದ ಯೋಜನೆಗಳು ಫಲಾನುಭವಿಗಳಿಗೆ ಸಮಯಕ್ಕೆ ಸರಿಯಾಗಿ ಸಿಗದೆ ಅಧಿಕಾರಿಗಳು ವಿಳಂಬ ನೀತಿಯನ್ನು ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಅಂತಹ ಅಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮಗಳೇನು?

ಶ್ರೀಮತಿ ಭಾಗೀರಥಿ ಮರುಳ ಸಿದ್ಧನಗೌಡ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು)

ಅ) ರಾಯಚೂರು ಜಿಲ್ಲೆಯಲ್ಲಿ ಯೋಜನಾವಾರು ಮತ್ತು ತಾಲ್ಲೂಕುವಾರು ಮಂಜೂರು ಮಾಡಿರುವ ಹಾಗೂ ಖರ್ಚು ಬಾಕಿ ವಿವರವನ್ನು ಅನುಬಂಧದಲ್ಲಿ ಒದಗಿಸಿದೆ.

ಆ) ಇಲ್ಲ. ಉದ್ಭವಿಸುವುದಿಲ್ಲ.